## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 146 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 05.12.2023 |
| ಉತ್ತರಿಸುವವರು | : | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ವಿವಿಧ ಖನಿಜ ಮತ್ತು ಉಪ ಖನಿಜಗಳ ಗಣಿಗಾರಿಕೆಗಾಗಿ ಎಷ್ಟು ಗಣಿ, ಕಲ್ಲುಗಣಿ ಗುತ್ತಿಗೆಗಳನ್ನು ಎಷ್ಟು ವಿಸ್ತೀರ್ಣದ ಪ್ರದೇಶದಲ್ಲಿ ಮಂಜೂರು ಮಾಡಲಾಗಿದೆ; ಯಾವ ವಿಧಾನ ಹಾಗೂ ಮಾನದಂಡಗಳ ಮೂಲಕ ಈ ಲೈಸೆನ್ಸ್ ಗಳನ್ನು ಮಂಜೂರು ಮಾಡಲಾಗಿದೆ; | ರಾಜ್ಯದಲ್ಲಿ ಕಳೆದ 05 ವರ್ಷಗಳಲ್ಲಿ ಹರಾಜು ಮೂಲಕ ವಿಲೇಪಡಿಸಲಾದ ಬ್ಲಾಕ್‌ಗಳ ಪೈಕಿ ಒಟ್ಟು 16 ಬ್ಲಾಕ್ ಗಳ ವಿಸ್ತೀರ್ಣ 1279.10 ಹೆಕ್ಟೇರ್ ಪ್ರದೇಶದಲ್ಲಿ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ನಿರ್ಧಿಷ್ಟ ಉಪಖನಿಜಗಳ ಗಣಿಗಾರಿಕೆಗಾಗಿ 291 ಗುತ್ತಿಗೆಗಳನ್ನು 1264-00 ಎಕರೆ ಪ್ರದೇಶದಲ್ಲಿ ಹಾಗೂ ನಿರ್ಧಿಷ್ಟವಲ್ಲದ ಉಪಖನಿಜ ಗಣಿಗಾರಿಕೆಗಾಗಿ 1383 ಗುತ್ತಿಗೆಗಳನ್ನು 5985-00 ಎಕರೆ ಪ್ರದೇಶದಲ್ಲಿ ಮಂಜೂರು ಮಾಡಲಾಗಿರುತ್ತದೆ.<br><br>**ಮಾನದಂಡಗಳು:**<br><br>ಮುಖ್ಯ ಖನಿಜಗಳ ಸಂಬಂಧ ಲಭ್ಯತೆ ದೃಢಪಟ್ಟಿರುವ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 10(B) ರಡಿಯಲ್ಲಿ ಹರಾಜು ಮೂಲಕ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಖನಿಜ ಲಭ್ಯತೆ ದೃಢಪಡದ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 11 ರಡಿಯಲ್ಲಿ ಸಂಯುಕ್ತ ಪರವಾನಿಗೆ (Composite Licence) (Prospecting-cum-Mining Lease) ನ್ನು ಸದರಿ ಕಾಯ್ದೆಯಡಿಯಲ್ಲಿ ರೂಪಿಸಲಾದ Mineral (Auction) Rules, 2015ರ ನಿಯಮ 9(4) ಮತ್ತು 10 ರಂತೆ ಹರಾಜು ಮಾಡಿ ಯಶಸ್ವಿಯಾದ ಬಿಡ್‌ದಾರರನ್ನು ಪರಿಗಣಿಸಿದ ನಂತರ The Mineral (Auction) Rules, 2015 ಮತ್ತು Mineral (Other Than Atomic and Hydro Carbons Energy Minerals) Concession Rules 2016 ರಡಿ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಎಂ.ಎಂ. (ಡಿ & ಆರ್) 1957 ರ ಸೆಕ್ಷನ್-15 ರಂತೆ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ ರಾಜ್ಯದಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿ ನಿಯಂತ್ರಣ ಕುರಿತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ನ್ನು ಜಾರಿಗೆ ತರಲಾಗಿದ್ದು, ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. |

| | | |
|---|---|---|
| | | ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಅಧಿಸೂಚನೆ ಜಾರಿ ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ಗುರುತಿಸಿರುವ ಉಪಖನಿಜದ ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು ನಿರ್ಧಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ಧಿಷ್ಟವಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರಿಂದ ಬಿಡ್ ಸ್ವೀಕರಿಸಿಕೊಂಡ ನಂತರ ಯಶಸ್ವಿ ಬಿಡ್ ದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.<br><br>ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2016ರ ನಿಯಮ-8-B(2)(a) ರಿಂದ (d) ಮತ್ತು (d-1) ರಂತೆ ದಿನಾಂಕ:12-08-2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿರುವ ಅರ್ಜಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರಗಳು ಸ್ವೀಕೃತವಾಗಿದ್ದಲ್ಲಿ ಸದರಿ ಅರ್ಜಿಗಳನ್ನು ರಕ್ಷಿಸಲ್ಪಟ್ಟ ಅರ್ಜಿಗಳೆಂದು ಪರಿಗಣಿಸಿ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗಿರುತ್ತದೆ.<br><br>ಪಟ್ಟಾ ಜಮೀನುಗಳಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಶಿಫಾರಸ್ಸಿನ ಮೇರೆಗೆ ಸರ್ಕಾರ/ನಿರ್ದೇಶಕರಿಂದ ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು/ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗಿದೆ.<br><br>ದಿನಾಂಕ:17-03-2023 ರಂದು ಸರ್ಕಾರವು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2023ನ್ನು ಜಾರಿಗೆ ತಂದಿದ್ದು, ದಿನಾಂಕ:12-08-2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸಲಾಗುತ್ತದೆ. |
| ಆ) | ರಾಜ್ಯದಲ್ಲಿ ಅನಧಿಕೃತ ಗಣಿ ಚಟುವಟಿಕೆಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಈ ಅನಧಿಕೃತ ಗಣಿಗಾರಿಕೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು; | ➢ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ: 21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದ್ದು, |

ಅನಧಿಕೃತ ಕಲ್ಲು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸುತ್ತಿದ್ದು, ಅನಧಿಕೃತ ಕಲ್ಲು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.

- ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಖನಿಜಗಳ ಗಣಿಗಾರಿಕೆಗಾಗಿ ಗಣಿ ಗುತ್ತಿಗೆಗಳನ್ನು ಪಾರದರ್ಶಕವಾಗಿ ಹರಾಜು ಮೂಲಕ ಮಂಜೂರು ಮಾಡಲಾಗುತ್ತಿದೆ.
- ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮವಹಿಲಾಗುತ್ತಿದೆ. ಈ ಸಂಬಂಧ ಈಗಾಗಲೇ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಮಂಜೂರು ಮಾಡಿರುವ ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಡ್ರೋಣ್ ಸರ್ವೆ ಕಾರ್ಯ ಕೈಗೊಳ್ಳಲು ಕ್ರಮವಹಿಸಲಾಗಿದೆ.
- ಅನಧಿಕೃತ ಖನಿಜ ಸಾಗಾಣಿಕೆಯನ್ನು ಪತ್ತೆ ಹಚ್ಚಲು ಖನಿಜ ರವಾನೆ ಪರವಾನಿಗೆ ಕಡ್ಡಾಯಗೊಳಿಸಲಾಗಿದ್ದು, ಖನಿಜ ರವಾನೆ ಪರವಾನಿಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ವಿತರಿಸಲಾಗುತ್ತಿದೆ.
- ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ.
- ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.
- ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು One State One GPS ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಖನಿಜ ಸಾಗಾಣಿಕಾ ವಾಹನಗಳು GPS ಅಳವಡಿಸಿಕೊಂಡು ಖನಿಜ ಸಾಗಾಣಿಕೆ ಪರವಾನಿಗೆಯೊಂದಿಗೆ ಸಾಗಾಣಿಕೆ ಮಾಡುವುದನ್ನು ಕಡ್ಡಾಯಗೊಳಿಸಿದೆ.
- 2021-22 ಮತ್ತು 2022-23 ನೇ ಸಾಲಿನಲ್ಲಿ ಅನಧಿಕೃತ ಗಣಿಗಾರಿಕೆಗೆ ಸಂಬಂಧಿಸಿದಂತೆ ಪತ್ತೆ ಹಚ್ಚಿದ ಪ್ರಕರಣಗಳು, ದಾಖಲಿಸಿದ ಮೊಕದ್ದಮೆಗಳು ಹಾಗೂ ಸಂಗ್ರಹಿಸಲಾದ ದಂಡದ ಮೊತ್ತದ ವಿವರಗಳು ಈ ಕೆಳಕಂಡಂತಿದೆ:

**ಅನಧಿಕೃತ ಮುಖ್ಯ ಖನಿಜ ಗಣಿಗಾರಿಕೆ:-**

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2021-22 | 12 | 1.71 | 02 |
| 2. | 2022-23 | 12 | 5.12 | 0 |
| ಒಟ್ಟು | | **24** | **6.83** | **02** |

**ಅನಧಿಕೃತ ಕಲ್ಲುಗಣಿಗಾರಿಕೆ:-**

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2021-22 | 476 | 668.87 | 162 |
| 2. | 2022-23 | 607 | 728.98 | 192 |
| ಒಟ್ಟು | | **1083** | **1397.85** | **354** |

**ಅನಧಿಕೃತ ಮರಳು ಗಣಿಗಾರಿಕೆ:-**

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2021-22 | 326 | 113.93 | 84 |
| 2. | 2022-23 | 239 | 92.51 | 63 |
| ಒಟ್ಟು | | **565** | **206.44** | **147** |

ಇ) ಮಂಜೂರಾದ ಗಣಿ ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆ ನಡೆಸುವುದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮವಹಿಲಾಗಿದ್ದು, ಡ್ರೋಣ್ ಸರ್ವೆ ಕಾರ್ಯ ಪ್ರಗತಿಯಲ್ಲಿರುತ್ತದೆ.

ಡ್ರೋಣ್ ಸರ್ವೆ ಕಾರ್ಯದ ವರದಿ ಪಡೆದು ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಸಿಐ 146 ಎಂಎಂಎಂ 2023**

(ಎಸ್.ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು